**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.**

**ಸಿ.ಸಿ. ನಂ. 2459/2025**

ಪ್ರಮಾಣ ವಚನ ಬೋಧಿಸಲಾಯಿತು.

| | | | |
|---|---|---|---|
| ಹೆಸರು | : | ಪಾಲಯ್ಯ | ಸಿ.ಡಬ್ಲ್ಯೂ-03 |
| ತಂದೆಯ ಹೆಸರು | : | ಈರಪಾಲಪ್ಪ | ಪಿ.ಡಬ್ಲ್ಯೂ-04 |
| ವಯಸ್ಸು | : | 42 ವರ್ಷ | |
| ಉದ್ಯೋಗ | : | ವ್ಯಾಪಾರ | |
| ವಾಸಸ್ಥಳ | : | ಚಿತ್ರನಾಯಕನಹಳ್ಳಿ | ದಿಃ 12-02-2026. |

**ಮುಖ್ಯ ವಿಚಾರಣೆ: ಮಾನ್ಯ ಎ.ಪಿ.ಪಿ. ರವರಿಂದಃ**

ಸಾಕ್ಷಿಗೆ ನಿಪಿ.2 ಅನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿಃ 2(ಬಿ) ಅಂತ ಗುರುತಿಸಲಾಯಿತು. ದಿನಾಂಕ 05.10.2025 ರಂದು ಸರ್ಕಾರಿ ಬಸ್ ನಿಲ್ದಾಣದ ಹತ್ತಿರ ಚಾಸಾ-1 ರವರ ಬೈಕ್ ಕಳ್ಳತನವಾದ ವಿಚಾರದಲ್ಲಿ ಪೊಲೀಸರು ಮಹಜರ್ ಕ್ರಮ ಜರುಗಿಸಲು ಬಂದಿದ್ದು , ನನ್ನ ಹಾಗೂ ಚಾಸಾ-2 ರವರ ಸಮಕ್ಷಮ ಮದ್ಯಾಹ್ನ 01.00 ರಿಂದ 01-30 ಗಂಟೆವೆರೆಗೆ ಚಾಸಾ-1 ರವರು ಸ್ಥಳ ತೋರಿಸಿದ ಮೇರೆಗೆ ಮಹಜರ್ ಕ್ರಮ ಜರುಗಿಸಿರುತ್ತಾರೆ. ಮಹಜರ್ ಸಮಯದಲ್ಲಿ ಭಾವಚಿತ್ರವನ್ನು ತೆಗೆಯಲಾಗಿರುತ್ತದೆ. ಸಾಕ್ಷಿಯು ನಿಪಿ.3 ರ ಭಾವಚಿತ್ರವನ್ನು ನೋಡಿ ಮಹಜರ್ ಸಮಯದಲ್ಲಿ ತಗೆಯಲಾಗಿರುತ್ತದೆ ಎಂದು ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಶ್ರೀಮತಿ ಬಿ.ಜಿ., ಆರೋಪಿ ಪರ ವಕೀಲರಿಂದಃ**

ನಾನು ಮತ್ತು ಚಾಸಾ-1 ರವರು ಒಂದೇ ಗ್ರಾಮಸ್ಥರು ಹಾಗೂ ಸ್ನೇಹಿತರು ಎಂದರೆ ಸರಿ. ಈ ಪ್ರಕರಣದ ಬಗ್ಗೆ ನನಗೆ ಖುದ್ದು ಮಾಹಿತಿ ಇರುವುದಿಲ್ಲ ಎಂದರೆ ಸರಿಯಲ್ಲ. ಚಾಸಾ-1 ರವರು ಮಹಜರಿಗೆ ನನ್ನನ್ನು ಕರೆದುಕೊಂಡು ಬಂದಿರುತ್ತಾರೆ ಎಂದರೆ ಸರಿ. ಮಹಜರ್ ಸಮಯದಲ್ಲಿ ನನ್ನ ಜೊತೆ ಚಾಸಾ-1 ಮತ್ತು 2 ರವರು ಹಾಜರಿದ್ದರು. ಚಾಸಾ-2 ರ ವರು ನಮ್ಮ ಗ್ರಾಮದವರು ಎಂದರೆ ಸರಿ. ಮಹಜರಿಗೆ ಹಾಜರಾಗಲು ಪೊಲೀಸರು ನೋಟೀಸ್ ನೀಡಿರುವುದಿಲ್ಲ, ಮಹಜರ್ ನಡೆದ ಸ್ಥಳಕ್ಕೆ ಮದ್ಯಾಹ್ನ 01-00 ಗಂಟೆಗೆ ಹೊಗಿರುತ್ತೇವೆ. ಮಹಜರ್ ಸ್ಥಳದ ಚಕ್ಕುಬಂದಿ ಪೂರ್ವಕ್ಕೆ ಕೆ ಎಸ್ ಆರ್ ಟಿ ಸಿ ಬಸ್ ನಿಲ್ದಾಣದ ಕಾಂಪೌಂಡ್, ಪಶ್ಚಿಮಃ ಕೆ ಎಸ್ ಆರ್ ಟಿ ಸಿ ನಿಲ್ದಾಣದ ಬಿಲ್ಡಿಂಗ್, ಉತ್ತರಃರಸ್ತೆ ಮತ್ತು ದಕ್ಷಿಣಕ್ಕ ರಸ್ತೆ ಇರುತ್ತದೆ. ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲದೇ ಇದ್ದರೂ

ಚಾಸಾ-1 ರ ವರ ಮಾತು ಕೇಳಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ.2 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ